ಸಿ.ಸಿ.ನಂ.398/2022
ಪಿ.ಡಬ್ಲ್ಯು-1

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು, ದಿನಾಂಕ:20.10.2023.**

**ಮುಖ್ಯ ವಿಚಾರಣೆ:- ಪಿರ್ಯಾದಿದಾರರ ಪರ ಶ್ರೀ.ಎಸ್. ಎಸ್. ಪಿ., ವಕೀಲರಿಂದ:-**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ. ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಪಿರ್ಯಾದಿಗೆ ಸಂಬಂಧಪಟ್ಟ ದಾಖಲೆಗಳು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ಈಗ ನೋಡುತ್ತಿರುವ ಚೆಕ್ ಆರೋಪಿ ನನಗೆ ನೀಡಿದ ಎಸ್.ಬಿ.ಐ., ಬ್ಯಾಂಕ್ ಚೆಕ್ ಇರುತ್ತದೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಚೆಕ್ ನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಸದರಿ ಚೆಕ್ ನಲ್ಲಿ ಇರುವ ಆರೋಪಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಕೆನರಾ ಬ್ಯಾಂಕ್, ಬ್ರಾಂಚ್ ಜಗಳೂರು ಇವರು ನೀಡಿದ ಮೆಮೋವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ನಾನು ಆರೋಪಿಗೆ ನೀಡಿದ ಲೀಗಲ್ ನೋಟೀಸ್ ದಿ:21.02.2022 ನೇದ್ದರ ಕಛೇರಿ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು ಮತ್ತು ಅದಕ್ಕೆ ಸಂಬಂದಪಟ್ಟ ಅಂಚೆ ರಶೀದಿ ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು. ಈಗ ನೋಡುತ್ತಿರುವ ವಾಪಸ್ಸಾದ ಒಂದು ತೆರೆದ ಅಂಚೆ ಲಕೋಟೆಯನ್ನು ಹಾಜರುಪಡಿಸುತ್ತಿದ್ದು ಸದರಿ ಖಾಲಿ ಲಕೋಟೆಯನ್ನು ನಿ.ಪಿ.5 ಎಂದು ಗುರುತಿಸಲಾಯಿತು.

ನನ್ನ ಪಿರ್ಯಾದಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು:** ಆರೋಪಿ ಪರ ಶ್ರೀ.ಜಿ.ಹೆಚ್.ಎಸ್., ವಕೀಲರಿಂದ:-

(ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ, ಪಾಟೀ ಸವಾಲು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಸಹಿ

ಸಿವಿಲ್ ನ್ಯಾಯಾಧೀಶರು, ಜಗಳೂರು